ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 15 ಗ್ರಾಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-01-2019.

**ಸುತ್ತೋಲೆ**

ವಿಷಯ: ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ ಬರಸ್ಥಿತಿ ಇರುವ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗದ ಅನುದಾನವನ್ನು ಅಧಿಕವಾಗಿ ಕುಡಿಯುವ ನೀರು ಮತ್ತು ಸರಬರಾಜು ಘಟಕಕ್ಕೆ ವಿನಿಯೋಗ ಕುರಿತು ಸೂಚನೆಗಳು.

ಉಲ್ಲೇಖ:
1. ಭಾರತ ಸರ್ಕಾರದ ಪತ್ರ ಸಂಖ್ಯೆ:12(32), ಎಫ್‌ಎಫ್‌ಸಿ/ಎಫ್‌ಸಿಡಿ/2015-16, ದಿನಾಂಕ:08-10-2015.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 75 ಗ್ರಾಪಸ 2015, ದಿನಾಂಕ: 03-02-2018.
3. ದಿನಾಂಕ:28-11-2018 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೀಡಿರುವ ಸೂಚನೆಗಳು.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 15 ಗ್ರಾಪಸ 2018, ದಿನಾಂಕ: 17-12-2018.

*****

ರಾಜ್ಯದ ಬಹುತೇಕ ತಾಲ್ಲೂಕುಗಳು ಬರಪೀಡಿತವೆಂದು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಸರ್ಕಾರದಿಂದ ಅಧಿಕೃತವಾಗಿ ಘೋಷಣೆಯಾಗಿರುವುದರಿಂದ, 14ನೇ ಹಣಕಾಸು ಆಯೋಗ ಅನುದಾನದಡಿಯಲ್ಲಿ ಕುಡಿಯುವ ನೀರಿನ ಕಾಮಗಾರಿಗಳಿಗೆ ಅಗತ್ಯತೆಗೆ ಅನುಗುಣವಾಗಿ ಅನುದಾನ ಉಪಯೋಗಿಸಲು ಈ ಕೆಳಕಂಡ ಸೂಚನೆಗಳನ್ನು ಪಾಲಿಸುವಂತೆ ನಿರ್ದೇಶಿಸಿದೆ.

- ಗ್ರಾಮ ಪಂಚಾಯತಿಗಳಿಗೆ ಹಂಚಿಕೆಯಾಗಿ ಬಿಡುಗಡೆಯಾಗಿರುವ ಹಣಕಾಸು ಆಯೋಗದ ಅನುದಾನವನ್ನು ಸ್ಥಳೀಯ ಅಗತ್ಯತೆಯನುಸಾರ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಮತ್ತು ಕುಡಿಯುವ ನೀರಿನ ಸಮರ್ಪಕ ನಿರ್ವಹಣೆಗಾಗಿ ಸಾರ್ವಜನಿಕ ಹಿತಾಸಕ್ತಿ ಮೇರೆಗೆ ಅಧಿಕವಾಗಿ ಬಳಸಿಕೊಳ್ಳಲು ಪ್ರಸಕ್ತ ಸಾಲಿಗೆ ವಿಶೇಷ ಅನುಮತಿ ನೀಡಿದೆ. ಆದುದರಿಂದ, ಸದರಿ ಕಾಮಗಾರಿಗಳಿಗೆ ನಿರ್ಬಂಧ ವಿಧಿಸುವ ಅಗತ್ಯತೆಯಿಲ್ಲ. ಹಣಕಾಸು ಆಯೋಗದ ಅನುದಾನವನ್ನು ಅಗತ್ಯತೆಗೆ ಅನುಗುಣವಾಗಿ ಕುಡಿಯುವ ನೀರಿನ ಕಾಮಗಾರಿಗಳಿಗೆ ಬಳಸುವುದು.

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯ್ತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯ್ತಿಗಳ ಅಭಿವೃದ್ಧಿ ಅಧಿಕಾರಿಗಳಿಗೆ (ಸಂಬಂಧಪಟ್ಟ ಜಿಲ್ಲಾ ಪಂಚಾಯ್ತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು ರವರ ಮಾಹಿತಿಗಾಗಿ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್–1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಇ–ಆಡಳಿತ ಆರ್.ಡಿ.ಪಿ.ಆರ್. ರವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟನ್ನು ಪ್ರತಿಬಿಂಬಿಸಲು.